ಸಮಾಚಾರ ಸಣ್ಣದಲ್ಲ

ತೆಲಂಗಾಣದಲ್ಲಿ 10ಕ್ಕೂ ಅಧಿಕ ಸ್ಥಾನ ಗೆಲುವು

ಬೆಳಗಾವಿ: ಈ ಬಾರಿ ಲೋಕಸಭೆ ಚುನಾವಣೆಯಲ್ಲಿ ತೆಲಂಗಾಣದಲ್ಲಿ 17 ಕ್ಷೇತ್ರಗಳ ಪೈಕಿ, 10ಕ್ಕೂ ಅಧಿಕ ಕ್ಷೇತ್ರಗಳಲ್ಲಿ ಗೆಲುವು ಸಾಧಿಸುತ್ತೇವೆ ಎಂದು ಲೋಕಸಭೆ ಚುನಾವಣೆಯ ತೆಲಂಗಾಣದ ಉಸ್ತುವಾರಿ ವಹಿಸಿಕೊಂಡ, ಶಾಸಕ ಅಭಯ ಪಾಟೀಲ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ತೆಲಂಗಾಣದ ನಾಯಕರು ಹಾಗೂ ಬಿಜೆಪಿ ಚುನಾವಣಾ ಸಮಿತಿ ಭೇಟಿಯಾಗಿ, ಚುನಾವಣೆಯಲ್ಲಿ ಗೆಲ್ಲಲು ಯೋಜನೆ ರೂಪಿಸುತ್ತೇವೆ. ವಾರದಲ್ಲಿ ಮೂರು ದಿನ ಬೆಳಗಾವಿ ಜಿಲ್ಲೆಯಲ್ಲಿ ಹಾಗೂ ಮೂರು ದಿನ ತೆಲಂಗಾಣದಲ್ಲಿ ಪ್ರಚಾರ ಮಾಡುತ್ತೇನೆ. ತೆಲಂಗಾಣದಲ್ಲಿ 10ಕ್ಕೂ ಹೆಚ್ಚು ಸ್ಥಾನ ಗೆಲ್ಲಿಸುವ ಜವಾಬ್ದಾರಿ ಕೊಟ್ಟಿದ್ದಾರೆ. ಅದನ್ನು ಸಮರ್ಥವಾಗಿ ನಿಭಾಯಿಸುತ್ತೇನೆ ಚಿಕ್ಕೋಡಿ ಮತ್ತು ತೆಲಂಗಾಣ ಎರಡೂ ಕ್ಷೇತ್ರಗಳಲ್ಲಿ ಉಸ್ತುವಾರಿಯಾಗಿ ಕೆಲಸ ಮಾಡುತ್ತೇನೆ. ಚಿಕ್ಕೋಡಿ ಉಸ್ತುವಾರಿ ಹಿಂದಕ್ಕೆ ಪಡೆಯುವಂತೆ ಪಕ್ಷದ ವರಿಷ್ಠರಿಗೆ ಮನವಿ ಮಾಡಿದ್ದೇನೆ ಎಂದು ಹೇಳಿದರು.

ದಾಖಲೆಗಳಿಲ್ಲದ ಚಿನ್ನಾಭರಣ ವಶ

ಹಿರಿಯೂರು: ಸೂಕ್ತ ದಾಖಲೆಗಳಿಲ್ಲದೆ ಸಾಗಿಸುತ್ತಿದ್ದ 5 ಕೆ.ಜಿ ಚಿನ್ನಾಭರಣವನ್ನು ವಶಕ್ಕೆ ಪಡೆಯಲಾಗಿದೆ. ಇದರ ಮೌಲ್ಯ 3.5 ಕೋಟಿ ಎಂದು ಅಂದಾಜಿಸಲಾಗಿದೆ. ನಗರದಲ್ಲಿ ಚೀಲ ಹಿಡಿದು ಅನುಮಾನಸ್ಪದವಾಗಿ ಓಡಾಡುತ್ತಿದ್ದವರನ್ನು ವಿಚಾರಿಸಿದ ಪೊಲೀಸರು, ಬ್ಯಾಗ್ ಪರಿಶೀಲಿಸಿದಾಗ ಚಿನ್ನ ಪತ್ತೆಯಾಗಿದೆ. 18 ಕ್ಯಾರೆಟ್ ಚಿನ್ನದ ದಾಖಲೆ ಹಾಜರುಪಡಿಸಲು ವಿಫಲರಾದ ಮನೋಜ್ ಎಂಬುವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಚಿನ್ನವನ್ನು ದಾವಣಗೆರೆಯಿಂದ ಹಿರಿಯೂರು ಚಿನ್ನದ ಅಂಗಡಿಗೆ ತರಲಾಗುತ್ತಿತ್ತು ಎನ್ನಲಾಗಿದೆ. ಮತ್ತೊಂದೆಡೆ ತಾಲೂಕಿನ ಮಸ್ಕಲ್ ಬಳಿ ವಾಹನವೊಂದರಲ್ಲಿ 6.8 ಲಕ್ಷ ನಗದು ಪತ್ತೆಯಾಗಿದೆ. ಚುನಾವಣಾ ಸಿಬ್ಬಂದಿ ಸರಕು ಸಾಗಣೆ ವಾಹನ ಪರಿಶೀಲನೆ ಮಾಡಿದಾಗ ನಗದು ಸಿಕ್ಕಿದೆ.

ಮೈತ್ರಿ ಕೊನೆಯವರೆಗೆ ಇರುವುದಿಲ್ಲ: ಖಂಡ್ರೆ

ಬೀದರ್: ಬಿಜೆಪಿ-ಜೆಡಿಎಸ್ ಮೈತ್ರಿ ಅವಕಾಶವಾದಿ ರಾಜಕಾರಣ ಎಂದು ಸಚಿವ ಈಶ್ವರ ಬಿ. ಖಂಡ್ರೆ ಟೀಕಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ-ಜೆಡಿಎಸ್ ಮೈತ್ರಿ ಅವಕಾಶವಾದಿ ಆಗಿರುವುದರಿಂದ ಅದು ಕೊನೆಯ ವರೆಗೆ ಇರುವುದಿಲ್ಲ, ರಾಜ್ಯದ ಜನತೆಗೆ ಇದೆಲ್ಲ ಗೊತ್ತಿದೆ ಎಂದರು. ಚುನಾವಣಾ ಬಾಂಡ್ ಮೂಲಕ ಕೋಟ್ಯಂತರ ರೂಪಾಯಿ ಪಡೆದಿರುವ ಬಿಜೆಪಿ ಜಗತ್ತಿನ ಅತಿ ದೊಡ್ಡ ಭ್ರಷ್ಟಾಚಾರ ಎಸಗಿದೆ. ಬಾಂಡ್ ಖರೀದಿಸಿ ಬಿಜೆಪಿಗೆ ದೇಣಿಗೆ ಕೊಟ್ಟಿದ್ದವರಿಗೆ ಸಾವಿರಾರು ಕೋಟಿ ರೂಪಾಯಿ ಕಾಮಗಾರಿ ಕೊಟ್ಟು ಅನುಕೂಲ ಮಾಡಿಕೊಡಲಾಗಿದೆ. ಯಾವ ಆಧಾರದ ಮೇಲೆ ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಅವರನ್ನು ಬಂಧಿಸಿದ್ದಾರೆ ಎಂದರು ಪ್ರಶ್ನಿಸಿದರು. ಭ್ರಷ್ಟಾಚಾರದ ಆರೋಪ ಹೊಂದಿರುವ ಕಾಂಗ್ರೆಸ್, ಎಎಪಿಯ ಮುಖಂಡರು ಬಿಜೆಪಿಗೆ ಸೇರಿದ ನಂತರ ಸ್ವಚ್ಛರಾಗಿದ್ದಾರೆ, ದೇಶದಲ್ಲಿ ಎಂದಿಗೂ ಇಂತಹ ಪರಿಸ್ಥಿತಿ ಬಂದಿರಲಿಲ್ಲ, ಪ್ರತಿಪಕ್ಷದವರಿಗೆ ಸಂಪನ್ಮೂಲ ಇಲ್ಲದಂತೆ ನೋಡಿಕೊಳ್ಳುವ ತಂತ್ರ ಬಿಜೆಪಿ ಮಾಡುತ್ತಿದೆ ಎಂದು ಅವರು ಆರೋಪಿಸಿದರು.

ಚುನಾವಣೆಯಲ್ಲಿ ಕೈಗೆ ಭರ್ಜರಿ ಯಶಸ್ಸು

ವಿಜಯಪುರ: ಈ ಸಲದ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ರಾಜ್ಯ ಮತ್ತು ದೇಶದೆಲ್ಲೆಡೆ ಭರ್ಜರಿ ಯಶಸ್ಸು ಕಾಣಲಿದೆ ಎಂದು ಬೃಹತ್ ಕೈಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ ವಿಶ್ವಾಸ ದಿಂದ ಹೇಳಿದರು. ಲೋಕಸಭೆ ಅಭ್ಯರ್ಥಿ ರಾಜು ಆಲಗೂರ ಪರ ಬುಧವಾರ ನಗರದ ಕಿತ್ತೂರು ಚೆನ್ನಮ್ಮ ಭವನದಲ್ಲಿ ನಡೆದ ಜಿಲ್ಲೆಯ ಪಕ್ಷದ ಮುಖಂಡರು, ಪದಾಧಿಕಾರಿಗಳ ಮಹತ್ವದ ಸಭೆಯಲ್ಲಿ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯನವರು ನೀಡಿದ್ದ ಬಹುತೇಕ ಭರವಸೆಯನ್ನು ಈಡೇರಿಸಿದ್ದಾರೆ. ಕಳೆದ ಬಿಜೆಪಿಯ ಯಡಿಯೂರಪ್ಪರ ಸರಕಾರ ನೀಡಿದ್ದ ಆರು ನೂರು ಭರವಸೆಯಲ್ಲಿ ಏದು ನೂರಕ್ಕೂ ಹೆಚ್ಚು ಭರವಸೆಗಳು ಹಾಗೇ ಉಳಿದಿವೆ. ಇದಲ್ಲದೇ ದೇಶದಲ್ಲಿ ಸಾಮಾನ್ಯರ ಜೀವನ ಸ್ಥಿತಿ ಚಿಂತಾಜನಕವಾಗಿದ್ದು, ಇದೆಲ್ಲ ಮರೆ ಮಾಚಲು ಬರೀ ಭಾವನಾತ್ಮಕ ವಿಚಾರ ಗಳನ್ನು ಅವರು ಎತ್ತುತ್ತಿದ್ದಾರೆ. ಜನರಿಗೆ ಇವರ ಆಟ ಅರ್ಥವಾಗಿದೆ. ರಾಜು ಆಲಗೂರ ಅವರು ಒಂದು ಲಕ್ಷಕ್ಕೂ ಹೆಚ್ಚು ಮತಗಳ ಅಂತರದಿಂದ ಗೆಲ್ಲಲಿದ್ದಾರೆ. ಇದರಲ್ಲಿ ಯಾವ ಸಂಶಯವೂ ಇಲ್ಲ ಎಂದರು.

ಚೆಕ್‌ಪೋಸ್ಟ್ ಬಳಿ ಚಿನ್ನಾಭರಣ ವಶ

ಕಲಬುರಗಿ: ಸೂಕ್ತ ದಾಖಲೆ ಇಲ್ಲದ 114.72 ಗ್ರಾಂ ಚಿನ್ನ ಹಾಗೂ 3.2 ಕೆ.ಜಿ. ಬೆಳ್ಳಿಯನ್ನು ಜಿಲ್ಲೆಯ ಕಲಬುರಗಿ-ಯಾದಗಿರಿ ಜಿಲ್ಲೆಯ ಗಡಿಯ ನಾಲವಾರ ಚೆಕ್ ಪೋಸ್ಟ್ ಬಳಿ ಗುರುವಾರ ವಶಕ್ಕೆ ಪಡೆಯಲಾಗಿದೆ. ಇವುಗಳ ಒಟ್ಟಾರೆ ಮೌಲ್ಯ 6,37,670 ಆಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಫೌಜಿಯಾ ತರನ್ನುಮ್ ಬಿ. ಅವರು ತಿಳಿಸಿದ್ದಾರೆ. ಲೋಕಸಭೆ ಚುನಾವಣೆ ಪ್ರಯುಕ್ತ ಅಕ್ರಮ ತಡೆಯಲು ಜಿಲ್ಲೆಯ ಗಡಿಗಳಲ್ಲಿ ಚೆಕ್ ಪೋಸ್ಟ್‌ಗಳನ್ನು ಸ್ಥಾಪಿಸಲಾಗಿದೆ.

ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ-ಕಾಂಗ್ರೆಸ್ ಮಧ್ಯೆ ನೇರ ಹಣಾಹಣಿ

ಹ್ಯಾಟ್ರಿಕ್ ಗೆಲುವಿನ ಸರದಾರನಿಗೆ ಕಾಂಗ್ರೆಸ್ ಸವಾಲೊಡ್ಡುವುದೇ?

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ರಾಜ್ಯದಲ್ಲಿ 2004ರ ಬಳಿಕ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಗೆದ್ದರೂ ಲೋಕಸಭೆ ಚುನಾವಣೆಯಲ್ಲಿ ಮತದಾರರು ಬಿಜೆಪಿಯನ್ನು ಬೆಂಬಲಿಸಿಕೊಂಡು ಬರುತ್ತಿದ್ದಾರೆ. ಇದು ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರಕ್ಕೂ ಅನ್ವಯವಾಗುತ್ತದೆ. ಈ ಕ್ಷೇತ್ರದಲ್ಲಿ ಬರುವ ಎಂಟು ವಿಧಾನಸಭಾ ಕ್ಷೇತ್ರಗಳಲ್ಲಿ ಹೆಚ್ಚು ಸ್ಥಾನಗಳನ್ನು ಕಾಂಗ್ರೆಸ್ ಗೆದ್ದರೂ ಲೋಕಸಭೆ ಚುನಾವಣೆಯಲ್ಲಿ ಮಾತ್ರ ಮತದಾರರು ಬಿಜೆಪಿಯನ್ನು ಬೆಂಬಲಿಸಿಕೊಂಡು ಬಂದಿದ್ದಾರೆ.

ಕ್ಷೇತ್ರ ಪುನರ್‌ವಿಂಗಡಣೆ ಬಳಿಕ ಸೃಷ್ಟಿಯಾದ ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರ 2009ರಿಂದಲೂ ಬಿಜೆಪಿಯ ಭದ್ರ ಕೋಟೆಯಾಗಿಯೇ ಉಳಿದಿದ್ದು, ಅದನ್ನು ವಶಪಡಿಸಿಕೊಳ್ಳಲು ಕಾಂಗ್ರೆಸ್ ನಡೆಸಿದ ಪ್ರಯತ್ನಗಳು ವ್ಯರ್ಥವಾಗಿವೆ. ಈ ಬಾರಿಯೂ ಬಿಜೆಪಿ ಮತ್ತು ಕಾಂಗ್ರೆಸ್ ಮಧ್ಯೆ ನೇರ ಹಣಾಹಣಿ ಇದ್ದು, ಬಿಜೆಪಿಯಿಂದ ಹಾಲಿ ಸಂಸದ ಸತತ ನಾಲ್ಕನೇ ಬಾರಿ ಗೆಲ್ಲುವ ಉತ್ಸಾಹದಲ್ಲಿದ್ದರೆ, ಕಾಂಗ್ರೆಸ್‌ನಿಂದ ರಾಜ್ಯಸಭೆ ಮಾಜಿ ಉಪಾಧ್ಯಕ್ಷ ಕೆ. ರೆಹಮಾನ್ ಖಾನ್ ಪುತ್ರ ಮನ್ಸೂರ್ ಆಲಿಖಾನ್ ಮೊದಲ ಬಾರಿ ಅದೃಷ್ಟ ಪರೀಕ್ಷೆಗೆ ಇಳಿದಿದ್ದಾರೆ.

ಕ್ಷೇತ್ರದ ಇತಿಹಾಸ ನೋಡಿದರೆ ಇದು ಬಿಜೆಪಿಯ ಭದ್ರ ಕೋಟೆ. ಹಾಲಿ ಸಂಸದ ಪಿ.ಸಿ.ಮೋಹನ್ 2009, 2014 ಮತ್ತು 2019ರಲ್ಲಿ ಸತತವಾಗಿ ಗೆಲ್ಲುವ ಮೂಲಕ ಹ್ಯಾಟ್ರಿಕ್ ಬಾರಿಸಿದ್ದಾರೆ. ಆದರೆ, ಕಳೆದ ಮೂರು ಚುನಾವಣೆಗಳನ್ನು ಗಮನಿಸಿದಾಗ ಕಾಂಗ್ರೆಸ್ ಅಭ್ಯರ್ಥಿಯ ಮತಗಳಿಕೆ ಪ್ರಮಾಣ ಹೆಚ್ಚುತ್ತಲೇ ಇದೆ. ಆದರೆ, ಬಿಜೆಪಿ ಮತಗಳಿಕೆ ಪ್ರಮಾಣ 2014ಕ್ಕೆ ಹೋಲಿಸಿದರೆ 2019ಕ್ಕೆ ಇಳಿಕೆಯಾಗಿತ್ತು. ಹೀಗಾಗಿ ಈ ಬಾರಿ ಕಾಂಗ್ರೆಸ್ ಹೆಚ್ಚು ಉತ್ಸಾಹದೊಂದಿಗೆ ಮುಂದುವರಿಯುತ್ತಿದೆ. ಆದರೆ, ಜೆಡಿಎಸ್ ಬೆಂಬಲವೂ ಇರುವುದರಿಂದ ಬಿಜೆಪಿ ಕೂಡ ಗೆಲ್ಲುವ ವಿಶ್ವಾಸದೊಂದಿಗೆ ಪ್ರಚಾರದಲ್ಲಿ ತೊಡಗಿದೆ.

ಅಲ್ಪಸಂಖ್ಯಾತರ (ಮುಸ್ಲಿಂ ಮತ್ತು ಕ್ರಿಶ್ಚಿಯನ್) ಮತಗಳು ಈ ಕ್ಷೇತ್ರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿರುವುದರಿಂದ ಕಾಂಗ್ರೆಸ್ ನಿರೀಕ್ಷೆಯಂತೆ ಮತ್ತೆ ಮುಸ್ಲಿಂ ಅಭ್ಯರ್ಥಿಗೆ ಇಲ್ಲಿ ಮಣೆ ಹಾಕಿದೆ. ಆದರೆ, ಕ್ರೈಸ್ತ ಮತದಾರರ ಸಂಖ್ಯೆಯೂ ಸಾಕಷ್ಟಿದ್ದು, ಈ ಬಾರಿ ಕ್ರಿಶ್ಚಿಯನ್ನರಿಗೆ ಟಿಕೆಟ್ ನೀಡದ ಕಾರಣ ಕಾಂಗ್ರೆಸ್ ಮುಖಂಡ ಬರ್ತಲೋಮಿಯೋ ಅವರು ಬಂಡಾಯವಾಗಿ ಸ್ಪರ್ಧಿಸುವುದಾಗಿ ಘೋಷಿಸಿದ್ದಾರೆ. ಒಂದೊಮ್ಮೆ ಪಕ್ಷದ ಮನವೊಲಿಕೆಗೆ ಬಗ್ಗದೆ ಬರ್ತಲೋಮಿಯೋ ನಾಮಪತ್ರ ಸಲ್ಲಿಸಿದರೆ ಕ್ರಿಶ್ಚಿಯನ್ ಮತಗಳು ಸ್ವಲ್ಪ ಮಟ್ಟಿಗೆ ಕಾಂಗ್ರೆಸ್ ಕೈ ಕಚ್ಚುವ ಸಾಧ್ಯತೆ ಕಾಣಿಸಿಕೊಂಡಿದೆ. ಹೀಗಾಗಿ ಅವರ ಮನವೊಲಿಕೆ ಕಾರ್ಯವನ್ನು ಕಾಂಗ್ರೆಸ್ ಅಭ್ಯರ್ಥಿ ಮನ್ಸೂರ್ ಅಲಿಖಾನ್ ಮತ್ತಿತರರು ಮುಂದುವರಿಸಿದ್ದಾರೆ.

ಈ ಬಾರಿ ಜೆಡಿಎಸ್ ಬೆಂಬಲ ಬಿಜೆಪಿಗೆ: 2009ರ ಚುನಾವಣೆಯಲ್ಲಿ ಈ ಕ್ಷೇತ್ರದಲ್ಲಿ ಜೆಡಿಎಸ್ ಅಭ್ಯರ್ಥಿ ಯಾಗಿ ಜಮೀರ್ ಅಹ್ಮದ್ ಖಾನ್ ಸ್ಪರ್ಧಿಸಿ 1.62 ಲಕ್ಷಕ್ಕೂ ಹೆಚ್ಚು ಮತ ಗಳಿಸಿದ್ದರು. 2014ರಲ್ಲಿ ಜೆಡಿಎಸ್ ಅಭ್ಯರ್ಥಿ ಕಣದಲ್ಲಿದ್ದರಾದರೂ ಸುಮಾರು 20 ಸಾವಿರ ಮತಗಳೊಂದಿಗೆ ನಾಲ್ಕನೇ ಸ್ಥಾನಕ್ಕೆ ತಳ್ಳಲ್ಪಟ್ಟಿದ್ದರು. ಆಮ್ ಆದ್ಮಿ ಪಾರ್ಟಿ ಅಭ್ಯರ್ಥಿ ಮೂರನೇ ಸ್ಥಾನ ಗಳಿಸಿದ್ದರು. 2019ರಲ್ಲಿ ಜೆಡಿಎಸ್ ಅಭ್ಯರ್ಥಿ ಕಣಕ್ಕಿಳಿಸದೆ ಕಾಂಗ್ರೆಸ್ಸನ್ನು ಬೆಂಬಲಿಸಿತ್ತು. ಹೀಗಾಗಿ ಆ ಪಕ್ಷದ ಮತ ಗಳಿಕೆ ಪ್ರಮಾಣ ಸಾಕಷ್ಟು ಹೆಚ್ಚಾಗಿತ್ತು. ಈ ಬಾರಿ ಬಿಜೆಪಿಗೆ ಜೆಡಿಎಸ್ ಬೆಂಬಲ ಸಿಗುತ್ತಿರುವುದು ಆ ಪಕ್ಷದ ಅಭ್ಯರ್ಥಿಗೆ ಅನುಕೂಲವಾ ಗಬಹುದು ಎಂದು ನಿರೀಕ್ಷಿಸಲಾಗಿದೆ.

ಬಿಜೆಪಿ, ಕಾಂಗ್ರೆಸ್ ಪರಿಸ್ಥಿತಿ: ಈಗಾಗಲೇ ಕ್ಷೇತ್ರದಲ್ಲಿ ಹ್ಯಾಟ್ರಿಕ್ ಗೆಲುವು ಸಾಧಿಸಿರುವ ಸಂಸದ ಪಿ.ಸಿ.ಮೋಹನ್ ಅವರಿಗೆ ಬಿಜೆಪಿ ನಾಲ್ಕನೇ ಬಾರಿ ಟಿಕೆಟ್ ನೀಡಿದೆ. ಮೇಲಾಗಿ ಕ್ಷೇತ್ರದಲ್ಲಿ ಪಕ್ಷದಿಂದ ಬೇರಾರೂ ಪ್ರಬಲ ಆಕಾಂಕ್ಷಿಗಳೂ ಇಲ್ಲ. ಕಾಂಗ್ರೆಸ್‌ನಿಂದ ಕಳೆದೆರಡು ಬಾರಿ ಸ್ಪರ್ಧಿಸಿದ್ದ ರಿಜ್ವಾನ್ ಅರ್ಷದ್ ಶಾಸಕರಾಗಿರುವು ದರಿಂದ ಈ ಬಾರಿ ಮನ್ಸೂರ್ ಅಲಿಖಾನ್ ಅವರಿಗೆ ಪಕ್ಷ ಟಿಕೆಟ್ ನೀಡಿದ್ದು, ಚುನಾವಣೆ ದೃಷ್ಟಿಯಿಂದ ಅವರು ಹೊಸಬರು. ಈ ಮಧ್ಯೆ ಹಾಲಿ ಶಾಸಕ, ಬಿಡಿಎ ಅಧ್ಯಕ್ಷ ಎನ್.ಎ.ಹ್ಯಾರಿಸ್ ಪುತ್ರ ಮೊಹಮ್ಮದ್ ನಲಪಾಡ್ ಹ್ಯಾರಿಸ್ ಅವರೂ ಈ ಬಾರಿ ಟಿಕೆಟ್‌ಗಾಗಿ ಸಾಕಷ್ಟು ಲಾಬಿ ನಡೆಸಿ ವಿಫಲರಾಗಿದ್ದಾರೆ. ಜತೆಗೆ ಕಾಂಗ್ರೆಸ್‌ನ ಮತಬ್ಯಾಂಕ್ ಆಗಿರುವ ಕ್ರಿಶ್ಚಿಯನ್ ಮತಗಳೂ ಹಂಚಿಹೋಗುವ ಆತಂಕ ಕಾಣಿಸಿಕೊಂಡಿದೆ.

3ರಲ್ಲಿ ಬಿಜೆಪಿ, 5ರಲ್ಲಿ ಕಾಂಗ್ರೆಸ್

ಬೆಂಗಳೂರು ಕೇಂದ್ರ ಲೋಕಸಭೆ ಚುನಾವಣಾ ಕ್ಷೇತ್ರ ವ್ಯಾಪ್ತಿಯಲ್ಲಿ ಎಂಟು ವಿಧಾನಸಭಾ ಕ್ಷೇತ್ರಗಳು ಬರುತ್ತವೆ. ಈ ಪೈಕಿ ಮೂರು ಕ್ಷೇತ್ರಗಳಲ್ಲಿ ಬಿಜೆಪಿ ಮತ್ತು ಐದು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಶಾಸಕರಿದ್ದಾರೆ. ಪಿ.ವಿ.ರಾಮನ್‌ನಗರ, ರಾಜಾಜಿನಗರ, ಮಹದೇವಪುರ ಕ್ಷೇತ್ರಗಳು ಬಿಜೆಪಿ ವಶದಲ್ಲಿದ್ದರೆ, ಸರ್ವಜ್ಞನಗರ, ಶಿವಾಜಿನಗರ, ಶಾಂತಿನಗರ, ಗಾಂಧಿ ನಗರ, ಚಾಮರಾಜಪೇಟೆ ಕ್ಷೇತ್ರಗಳು ಕಾಂಗ್ರೆಸ್ ಹಿಡಿತದಲ್ಲಿವೆ. ಈ ಹಿಂದಿನ ಚುನಾವಣೆಗಳಲ್ಲೂ ಇದೇ ರೀತಿಯ ಸ್ಥಾನಗಳಿದ್ದರೂ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಗೆಲ್ಲುತ್ತಲೇ ಬಂದಿದೆ.

ಲೋಕ ಕಣ ಚಿತ್ರಣ

ಜಾತಿವಾರು ಮತಗಳು

ಮುಸ್ಲಿಂ- **6,00,000**
ಕ್ರೈಸ್ತರು- **2,00,000**
ಪರಿಶಿಷ್ಟ ಜಾತಿ- **4,00,000**
ಒಬಿಸಿ- **6,00,000**

2019ರ ಫಲಿತಾಂಶ

ಪಿ.ಸಿ.ಮೋಹನ್ (ಬಿಜೆಪಿ)
6,02,853
ರಿಜ್ವಾನ್ ಅರ್ಷದ್ (ಕಾಂಗ್ರೆಸ್)
5,31,885
ಗೆಲುವಿನ ಅಂತರ
70,968

ಐಟಿ, ಬಿಟಿ ಮಂದಿ ಮತಗಳ ಮೇಲೆ ಕಣ್ಣು

ಕ್ಷೇತ್ರದಲ್ಲಿ ಮುಸ್ಲಿಮರಷ್ಟೇ ಮತಗಳು ಇತರೆ ಹಿಂದುಳಿದ ವರ್ಗ (ಒಬಿಸಿ)ಯವರದ್ದಿದೆ. ಸಹಜವಾಗಿಯೇ ಇವರು ತಮ್ಮ ಸಮುದಾಯದ ಅಭ್ಯರ್ಥಿ ಬಿಜೆಪಿಯ ಪಿ.ಸಿ.ಮೋಹನ್ ಪರ ನಿಂತಿದ್ದಾರೆ. ಇವರ ಜತೆಗೆ ತಮಿಳು ಭಾಷಿಕ ಮತಗಳೂ ಸಾಕಷ್ಟು ಪ್ರಮಾಣದಲ್ಲಿದ್ದು, ಇವರು ಎರಡೂ ಪಕ್ಷಗಳಲ್ಲಿ ಹಂಚಿ ಹೋಗಿದ್ದಾರೆ. ಹೀಗಾಗಿ ಬಿಜೆಪಿ ಕಣ್ಣು ಈ ಕ್ಷೇತ್ರದಲ್ಲಿ ಹೆಚ್ಚಿನ ಪ್ರಮಾಣದಲ್ಲಿರುವ ಐಟಿ-ಬಿಟಿ ಉದ್ಯೋಗಿಗಳ ಮೇಲೆ ಇದೆ. ಆದರೆ, ಮತದಾನದಲ್ಲಿ ಇವರು ಪಾಲ್ಗೊಳ್ಳದ ಕಾರಣ ಕ್ಷೇತ್ರದಲ್ಲಿ ಮತದಾನ ಪ್ರಮಾಣ ಕಡಿಮೆಯಾಗಿದೆ. ಹೀಗಾಗಿ ಈ ಬಾರಿ ಹೇಗಾದರೂ ಅವರನ್ನು ಮತಗಟ್ಟೆಗೆ ಕರೆತರಬೇಕು ಎಂಬ ನಿಟ್ಟಿನಲ್ಲಿ ಬಿಜೆಪಿ ಪ್ರಯತ್ನಿಸುತ್ತಿದೆ.

ಮತದಾರರು

ಪುರುಷ	2,36,897
ಮಹಿಳೆ	11,61,548
ಇತರೆ	465
ಒಟ್ಟು	23,98,910

ಸಚಿವ ಮಧು ಬಂಗಾರಪ್ಪ ವಿರುದ್ಧ ಬಿವೈಆರ್ ಕಿಡಿ

ಶಿವಮೊಗ್ಗ: ಸಚಿವ ಮಧು ಬಂಗಾರಪ್ಪ ಅವರು ತಮ್ಮ ವಿರುದ್ಧ ಬಳಸುತ್ತಿರುವ ಪದಗಳು ಅತ್ಯಂತ ಅಸಹ್ಯ ಹಾಗೂ ವಿಷಾದದಿಂದ ಕೂಡಿದೆ ಎಂದು ಬಿಜೆಪಿ ಅಭ್ಯರ್ಥಿ ಬಿ. ವೈ ರಾಘವೇಂದ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಬಿಜೆಪಿ ಜಿಲ್ಲಾ ಕಚೇರಿಯಲ್ಲಿ ಮಾತನಾಡಿದ ಅವರು, ಶಿವಮೊಗ್ಗಕ್ಕೆ ತನ್ನದೇ ಆದ ರಾಜಕೀಯ ಇತಿಹಾಸವಿದೆ. ಅನೇಕ ಸಿಎಂಗಳನ್ನು ನೀಡಿದ ಜಿಲ್ಲೆಯಾಗಿದೆ. ನಮ್ಮ ದೌರ್ಭಾಗ್ಯ ಎಂದರೆ ಅಭಿವೃದ್ಧಿಯ ಬಗ್ಗೆ ಚರ್ಚೆ ಆಗುತ್ತದೆ ಎಂದುಕೊಂಡಿದ್ದೆ. ಆದರೆ, ಶಿಕ್ಷಣ ಸಚಿವ ಮಧು ಬಂಗಾರಪ್ಪನವರು ಪ್ರಚಾರ ಸಭೆಯಲ್ಲಿ ಉಪಯೋಗಿಸುವ ಪದಗಳು ಅತ್ಯಂತ ವಿಷಾದಕರ ಅನ್ನಿಸುತ್ತಿದೆ ಎಂದಿದ್ದಾರೆ.

ಮೋದಿಯವರನ್ನು ವಿಶ್ವ ಮಾನವ ಎಂದಿದ್ದಕ್ಕೆ ನಾವೇನು ಪುಕ್ಸಟ್ಟೆ ಸಿಕ್ಕಿದ್ದೇವಾ? ಎಂಬ ಮಾತನ್ನು ಆಡಿದ್ದಾರೆ. ನಾವು ಆಡಳಿತ ನಡೆಸಲು ಶುರು ಮಾಡಿ ಕೇವಲ 10 ವರ್ಷ ತುಂಬುತ್ತಿದೆ. ಆದರೆ ಹಿಂದಿನ ಅವಧಿಯಲ್ಲಿ ನೀವು ಏನೆಲ್ಲ ಸಾಧನೆ ಮಾಡಿದ್ದೀರಿ ಎಂದು ಒಮ್ಮೆ ಅವಲೋಕನ ಮಾಡಿಕೊಳ್ಳಿ. ಬಿಜೆಪಿ ಕಾರ್ಯಕರ್ತರನ್ನು ಚೇಲಾಗಳು ಎಂದು ಸಚಿವರು ಕರೆದಿದ್ದಾರೆ. ಇದು ಸರಿಯಲ್ಲ ಎಂದು ತಿರುಗೇಟು ನೀಡಿದರು.

ಸಚಿವರು ನಮ್ಮ ಕುಟುಂಬದ ಬಗ್ಗೆ ಆರೋಪ ಮಾಡಿದ್ದಾರೆ. ನಮ್ಮ ಕುಟುಂಬದಿಂದ ಸಂಘಟನೆ ಹಾಳಾಗಿದೆ ಎಂದು ಹೇಳಿದ್ದಾರೆ. ಆದರೆ ಶಿಕಾರಿಪುರದಲ್ಲಿ ಯಡಿಯೂರಪ್ಪನವರನ್ನು ಎಂಟು ಬಾರಿ ಆಯ್ಕೆ ಮಾಡಿದ್ದಾರೆ. ಅದೇ ರೀತಿ ವಿಜಯೇಂದ್ರ ಈಗ ಆಯ್ಕೆ ಆಗಿದ್ದಾರೆ. ನನಗೂ ಜನ ಆಶೀರ್ವಾದ ಮಾಡಿದ್ದಾರೆ. ನಾನು ಬಿಜೆಪಿಯ ಅಧಿಕೃತ ಅಭ್ಯರ್ಥಿ.

-ಬಿ.ವೈ.ರಾಘವೇಂದ್ರ, ಸಂಸದ

2014ರಿಂದಲೇ ಜೆಡಿಎಸ್ - ಬಿಜೆಪಿ ಮೈತ್ರಿ; ಹೊಸದೇನಲ್ಲ

ಮೈಸೂರು: ಜೆಡಿಎಸ್ - ಬಿಜೆಪಿ ಮೈತ್ರಿ ಹೊಸದೇನಲ್ಲ, ಎರಡೂ ಪ